ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಬುಧವಾರ, ೧೦ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೯, ಶಕವರ್ಷ ೧೯೪೭)<br>BENGALURU, WEDNESDAY, 10 SEPTEMBER, 2025 (BHADRAPADA 19, SHAKAVARSHA 1947) | ನಂ. ೫೬೬<br>No. 566 |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆಸಚಿವಾಲಯ

## ಅಧಿಸೂಚನೆ

## ಸಂಖ್ಯೆ: ಸಂವ್ಯಶಾಇ 63 ಶಾಸನ 2025, ದಿನಾಂಕ: 10.09.2025

ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) **ವಿಧೇಯಕ**, 2025 ಇದಕ್ಕೆ 2025ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 58 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

## 2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 58

(2025 ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ಅಧಿನಿಯಮ, 2025

(2025 ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ 2013ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ 2013 (2015ರ ಕರ್ನಾಟಕ ಅಧಿನಿಯಮ 25)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು, ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು .

**2. ಪ್ರಕರಣ 1ರ ತಿದ್ದುಪಡಿ.-** ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ 2013 (2015ರ ಕರ್ನಾಟಕ ಅಧಿನಿಯಮ 25)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು

ಉಲ್ಲೇಖಿಸಲಾಗಿದೆ) 1ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿನ "ಹತ್ತು ವರ್ಷಗಳ ಅವಧಿಯವರೆಗೆ" ಎಂಬ ಪದಗಳ ಬದಲಿಗೆ "ಇಪ್ಪತ್ತು ವರ್ಷಗಳ ಅವಧಿಯವರೆಗೆ" ಎಂಬ ಪದಗಳನ್ನು, 2025ರ ಮೇ ಇಪ್ಪತ್ತೇಳನೇ ದಿನಾಂಕದಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಿರುವುದಾಗಿ ಭಾವಿಸತಕ್ಕದ್ದು.

**3. ಪ್ರಕರಣ 8ರ ತಿದ್ದುಪಡಿ.-** ಮೂಲ ಅಧಿನಿಯಮದ 8ನೇ ಪ್ರಕರಣದಲ್ಲಿನ "ದಂಡ ಪ್ರಕ್ರಿಯಾ ಸಂಹಿತೆ, 1973 ರಲ್ಲಿ (1974ರ ಕೇಂದ್ರ ಅಧಿನಿಯಮ ಸಂಖ್ಯೆ 2)" ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳ ಬದಲಿಗೆ "ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, 2023 (2023ರ ಕೇಂದ್ರ ಅಧಿನಿಯಮ 46)ರಲ್ಲಿ" ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳನ್ನು ಪ್ರತಿಯೋಜಿಸತಕ್ಕದು.

**4. ಹೊಸ ಪ್ರಕರಣದ 10ರ ಸೇರ್ಪಡೆ**.- ಮೂಲ ಅಧಿನಿಯಮದ 9ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"**10. ತೊಂದರೆಗಳ ನಿವಾರಣಾ ಅಧಿಕಾರ.-** (1)ಈ ಅಧಿನಿಯಮದ ಉಪಬಂಧಗಳು ಜಾರಿಗೆ ತರುವಲ್ಲಿ ಯಾವುದೇ ತೊಂದರೆಗಳು ಉದ್ಭವಿಸಿದಲ್ಲಿ, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಅವಶ್ಯಕವೆಂದು ಕಂಡುಬರಬಹುದಾದಂಥ ಅಥವಾ ತೊಂದರೆಗಳನ್ನು ನಿವಾರಿಸಲು ಯುಕ್ತವಾದಂಥ ಉಪಬಂಧಗಳನ್ನು ರಚಿಸಬಹುದು.

(2) ಉಪಪ್ರಕರಣ (1)ರಡಿ ಮಾಡಲಾದ ಪ್ರತಿ ಆದೇಶವನ್ನು ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಮುಂದೆ ಮಂಡಿಸತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**PARLIAMENTARY AFFAIRS AND LEGISLATION SECRETARIAT**

**NOTIFICATION**

**NO. DPAL 63 SHASANA 2025, BENGALURU, DATED: 10.09.2025**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 58 )ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.-

## KARNATAKA ACT NO. 58 OF 2025

(First Published in the Karnataka Gazette Extra-ordinary on the 10th day of September, 2025)

# THE KARNATAKA ESSENTIAL SERVICES MAINTENANCE (AMENDMENT) ACT, 2025

(Received the assent of the Governor on the 10th day of September, 2025)

An Act to amend the Karnataka Essential Services Maintenance Act, 2013;

Whereas it is expedient to amend the Karnataka Essential Services Maintenance Act, 2013 (Karnataka Act 25 of 2015) and for matters connected therewith for the purposes hereinafter appearing.

Be it enacted by the Karnataka State Legislature in the seventy sixth year of the Republic of India, as follows:-

**1. Short title and commencement.-** (1) This Act may be called the Karnataka Essential Services Maintenance (Amendment) Act, 2025.

(2) It shall come into force at once.

**2. Amendment of section 1.-** In the Karnataka Essential Services Maintenance Act, 2013 (Karnataka Act 25 of 2015) (hereinafter referred to as the Principal Act). In section 1, in sub-section (3) for the words "for a period of ten years" the words "for a period of twenty years" shall be deemed to have been substituted with effect from twenty seventh day of May, 2025.

**3. Amendment of section 8.-** In the Principal Act, in section 8 for the words, figures and brackets "the Code of Criminal Procedure, 1973 (Central Act 2 of 1974)" the words, figures and brackets "the Bharatiya Nagarik Suraksha Sanhitha, 2023 (Central Act 46 of 2023)", shall be substituted.

**4. Insertion of new section 10.-** In the Principal Act, after section 9, the following shall be inserted, namely:-

**"10. Power to remove difficulty.-** (1) If any difficulty arises in giving effect to the provisions of this Act, then the State Government may, by notification in the Official Gazette, make such provisions as may appear to it to be necessary or expedient for purpose of removing the difficulty.

(2) Every order made under sub-section (1), shall as soon as after it is made, be laid before the State Legislature."

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



The above translation of ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 58) into English language be published in the official Gazette under clause (3) of Article 348 of the Constitution of India.

**THAAWARCHAND GEHLOT**
**GOVERNOR OF KARANATAKA**

By Order and in the name of
the Governor of Karnataka,

**G.SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH